# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **79(91)** |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಅತಿಥಿ ಶಿಕ್ಷಕರ ನೇಮಕ ಮಾಡಲು ಇರುವ ನಿಯಮ ಹಾಗೂ ಮಾನದಂಡಗಳೇನು; ಈ ಕುರಿತು ಸರ್ಕಾರವು ನೂತನ ನಿಯಮಾವಳಿಗಳನ್ನು ರಚಿಸಿದೆಯೇ: ರಚಿಸಿದ್ದಲ್ಲಿ, ಯಾವ-ಯಾವ ನಿಯಮಗಳನ್ನು ಸೇರಿಸಲಾಗಿದೆ: (ಸಂಪೂರ್ಣ ಮಾಹಿತಿ ನೀಡುವುದು)</td><td>ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) ನಿಯಮಗಳು, 1967 ರಲ್ಲಿನ ಬೋಧಕ ಹುದ್ದೆಗಳಿಗೆ ವಿದ್ಯಾರ್ಹತೆಯನ್ನು ನಿರ್ಧಿಷ್ಟಪಡಿಸಲಾಗಿದೆ.<br><br>ಮುಂದುವರೆದು ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2016 ರಲ್ಲಿ ಕೆಲವೊಂದು ಬೋಧಕ ವರ್ಗದ ಹುದ್ದೆಗಳಿಗೆ ನಿರ್ಧಿಷ್ಟಪಡಿಸಿರುವ ವಿದ್ಯಾರ್ಹತೆಗಳಿಗೆ ತಿದ್ದುಪಡಿಗಳನ್ನು ಮಾಡಲಾಗಿರುತ್ತದೆ.<br><br>ರಾಜ್ಯದಲ್ಲಿ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಮೇಲೆ ತಿಳಿಸಿದ ವಿದ್ಯಾರ್ಹತೆಯೆ ಅನ್ವಯಿಸುತ್ತದೆ.</td></tr>
<tr><td>ಆ)</td><td>ಬೆಳಗಾವಿ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಎಷ್ಟು ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ; ಇಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)</td><td>ಬೆಳಗಾವಿ, ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ನೇಮಕಾತಿ ಮಾಡಿಕೊಳ್ಳಲಾದ ಅತಿಥಿ ಶಿಕ್ಷಕರ ವಿವರಗಳು ಕೆಳಗಿನಂತಿವೆ.
<table>
<tr><th colspan="4">ಪ್ರಾಥಮಿಕ</th><th colspan="2">ಪ್ರೌಢ</th></tr>
<tr><th>ಕ್ರ. ಸಂ</th><th>ಜಿಲ್ಲೆಯ ಹೆಸರು</th><th>ಖಾಲಿ ಹುದ್ದೆಗಳ ಸಂಖ್ಯೆ</th><th>ಅತಿಥಿ ಶಿಕ್ಷಕರ ಸಂಖ್ಯೆ</th><th>ಖಾಲಿ ಹುದ್ದೆಗಳ ಸಂಖ್ಯೆ</th><th>ಅತಿಥಿ ಶಿಕ್ಷಕರ ಸಂಖ್ಯೆ</th></tr>
<tr><td>1</td><td>ಬೆಳಗಾವಿ</td><td>1638</td><td>1441</td><td>303</td><td>277</td></tr>
<tr><td>2</td><td>ಚಿಕ್ಕೋಡಿ</td><td>2557</td><td>2250</td><td>550</td><td>502</td></tr>
<tr><td>3</td><td>ವಿಜಯಪುರ</td><td>1586</td><td>1317</td><td>220</td><td>183</td></tr>
<tr><td>4</td><td>ಬಾಗಲಕೋಟೆ</td><td>1186</td><td>1098</td><td>319</td><td>291</td></tr>
</table></td></tr>
<tr><td>ಇ)</td><td>ಅತಿಥಿ ಶಿಕ್ಷಕರ ನೇಮಕದಲ್ಲಿ ಸರ್ಕಾರ ನಿಯಮಗಳನ್ನು ಪಾಲಿಸದೇ, ಶಿಕ್ಷಕರ ನೇಮಕಾತಿ ಮಾಡಿಕೊಂಡಿರುವ ಆರೋಪಗಳು ಸರ್ಕಾರಕ್ಕೆ ಸಲ್ಲಿಕೆಯಾಗಿವೆಯೇ; ಆಗಿದ್ದಲ್ಲಿ, ಈ ಕುರಿತು ಸರ್ಕಾರದ ಕ್ರಮವೇನು; (ವಿವರ ನೀಡುವುದು)</td><td>ಅತಿಥಿ ಶಿಕ್ಷಕರ ನೇಮಕದಲ್ಲಿ ಸರ್ಕಾರದ ನಿಯಮಗಳನ್ನು ಪಾಲಿಸದೆ ಶಿಕ್ಷಕರ ನೇಮಕಾತಿ ಮಾಡಿಕೊಂಡಿರುವ ಆರೋಪಗಳು / ದೂರುಗಳು ಸ್ವೀಕೃತವಾಗಿರುವುದಿಲ್ಲ.<br><br>ಉದ್ಭವಿಸುವುದಿಲ್ಲ.</td></tr>
</table>

| | | |
|---|---|---|
| ಈ) | ಬಾಗಲಕೋಟೆ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರ ನಿಯಮಗಳನ್ನು ಪಾಲಿಸದೇ ಅತಿಥಿ ಶಿಕ್ಷಕರ ನೇಮಕಾತಿಯನ್ನು ಮಾಡಿಕೊಂಡಿರುವುದಾಗಿ ಸಾಕಷ್ಟು ಆರೋಪಗಳು ಸಾರ್ವಜನಿಕರಿಂದ ಕೇಳಿ ಬಂದಿವೆ. ಇದು ಸರ್ಕಾರದ ಗಮನಕ್ಕೆ ಬಂದಿರುವುದು ನಿಜವೇ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; | ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರು(ಆಡಳಿತ) ರವರಿಂದ ವರದಿ ಪಡೆಯಲಾಗಿದ್ದು, ಅಂತಹ ದೂರುಗಳು ಸ್ವೀಕೃತಗೊಂಡಿರುವುದಿಲ್ಲ. |
| ಉ) | ಈಗಾಗಲೇ ಅತಿಥಿ ಉಪನ್ಯಾಸಕರಾಗಿ ಸುಮಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವವರನ್ನು ಕೂಡಲೇ ಬಿಡುಗಡೆಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಉದ್ಭವಿಸುವುದಿಲ್ಲ. |

**ಸಂಖ್ಯೆ: ಇಪಿ 233 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**